	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಶೃಂಗೇರಿ	-ಅದೇ-	-ಅದೇ-
	ದಲಾಯತ್	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಶೃಂಗೇರಿ	-ಅದೇ-	-ಅದೇ-
90	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	07	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಂಡೂರು, ಹಗರಿಬೊಮ್ಮನಹಳ್ಳಿ, ಪಾಂಡವಪುರ, ಯಳಂದೂರು, ಆಲೂರು, ಮುಂಡರಗಿ, ಹಾಗೂ ಗುಡಿಬಂಡೆ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	06	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಸಂಡೂರು, ಹಗರಿಬೊಮ್ಮನಹಳ್ಳಿ, ಪಾಂಡವಪುರ, ಯಳಂದೂರು, ಆಲೂರು, ಹಾಗೂ ಗುಡಿಬಂಡೆ	-ಅದೇ-	-ಅದೇ-
	ದಲಾಯತ್	03	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಸಂಡೂರು ಪಾಂಡವಪುರ ಹಾಗೂ ಮುಂಡರಗಿ	-ಅದೇ-	-ಅದೇ-

91	2ನೇ ಅಧಿಕ ಸರ್ಕಾರಿ ಅಭಿಯೋಜಕರು	01	2ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ	–ಅದೇ–	–ಅದೇ–
	ಅಧೀಕ್ಷಕರು	01	–ಅದೇ–	–ಅದೇ–	
	ಶೀಘ್ರಲಿಪಿಗಾರರು	01	–ಅದೇ–	–ಅದೇ–	–ಅದೇ–
	ದಲಾಯತ್	01	–ಅದೇ–	–ಅದೇ–	–ಅದೇ–
92	ಸರ್ಕಾರಿ ಅಭಿಯೋಜಕರು	01	ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬಾಗಲಕೋಟೆ	–ಅದೇ–	–ಅದೇ–
	ಶೀಘ್ರಲಿಪಿಗಾರರು	01	ಸರ್ಕಾರಿ ಅಭಿಯೋಜಕರ ಕಛೇರಿ, ಬಾಗಲಕೋಟೆ	–ಅದೇ–	–ಅದೇ–
	ದಲಾಯತ್	01	–ಅದೇ–	–ಅದೇ–	–ಅದೇ–
93	ಸರ್ಕಾರಿ ಅಭಿಯೋಜಕರು	01	ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೀದರ್	–ಅದೇ–	–ಅದೇ–
	ಶೀಘ್ರಲಿಪಿಗಾರರು	01	ಸರ್ಕಾರಿ ಅಭಿಯೋಜಕರ ಕಛೇರಿ, ಬೀದರ್	–ಅದೇ–	–ಅದೇ–
	ದಲಾಯತ್	01	–ಅದೇ–	–ಅದೇ–	–ಅದೇ–
94	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು	01	3ನೇ ಅಧಿಕ ಸಿಜೆ ಮತ್ತು ಸಿಜೆಎಂ ನ್ಯಾಯಾಲಯ, ಧಾರವಾಡ	–ಅದೇ–	–ಅದೇ–
	ಬೆರಳಚ್ಚುಗಾರ–ವ–ಸಹಾಯಕ	01	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, 3ನೇ ಅಧಿಕ ಸಿಜೆ ಮತ್ತು ಸಿಜೆಎಂ ನ್ಯಾಯಾಲಯ, ಧಾರವಾಡ	–ಅದೇ–	–ಅದೇ–
	ದಲಾಯತ್	01	–ಅದೇ–	–ಅದೇ–	–ಅದೇ–
95	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರು	05	ಅಧಿಕ ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಆನೇಕಲ್, ರಾಯಭಾಗ, ಗೌರಿಬಿದನೂರು, ಕೊಳ್ಳೇಗಾಲ, ಹಾಗೂ ಚಾಮರಾಜನಗರ	–ಅದೇ–	–ಅದೇ–
	ಬೆರಳಚ್ಚುಗಾರ–ವ–ಸಹಾಯಕ	04	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಆನೇಕಲ್, ಗೌರಿಬಿದನೂರು, ಕೊಳ್ಳೇಗಾಲ, ಮತ್ತು ಚಾಮರಾಜನಗರ	–ಅದೇ–	–ಅದೇ–
96	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಮುಂಡಗೋಡು	–ಅದೇ–	–ಅದೇ–
	ಬೆರಳಚ್ಚುಗಾರ–ವ–ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಮುಂಡಗೋಡು	–ಅದೇ–	–ಅದೇ–
97	ಸಹಾಯಕ ಅಭಿಯೋಗ ನಿರ್ದೇಶಕರು	01	ಆರಕ್ಷಕ ಅಧೀಕ್ಷಕರ ಕಛೇರಿ ಗದಗ	–ಅದೇ–	–ಅದೇ–
	ಶೀಘ್ರಲಿಪಿಗಾರರು	01	ಸಹಾಯಕ ಅಭಿಯೋಗ ನಿರ್ದೇಶಕರ ಕಛೇರಿ, ಗದಗ	–ಅದೇ–	–ಅದೇ–
	ದಲಾಯತ್	01	–ಅದೇ–	–ಅದೇ–	–ಅದೇ–
98	ಸಹಾಯಕ ಅಭಿಯೋಗ ನಿರ್ದೇಶಕರು	01	ಆರಕ್ಷಕ ಅಧೀಕ್ಷಕರ ಕಛೇರಿ, ಹಾವೇರಿ	–ಅದೇ–	–ಅದೇ–
	ಶೀಘ್ರಲಿಪಿಗಾರರು	01	ಸಹಾಯಕ ಅಭಿಯೋಗ ನಿರ್ದೇಶಕರ ಕಛೇರಿ, ಹಾವೇರಿ	–ಅದೇ–	–ಅದೇ–
	ದಲಾಯತ್	01	–ಅದೇ–	–ಅದೇ–	–ಅದೇ–
99	ಸಹಾಯಕ ಅಭಿಯೋಗ ನಿರ್ದೇಶಕರು	01	ಆರಕ್ಷಕ ಅಧೀಕ್ಷಕರ ಕಛೇರಿ, ಬಾಗಲಕೋಟೆ	–ಅದೇ–	–ಅದೇ–
	ಶೀಘ್ರಲಿಪಿಗಾರರು	01	ಸಹಾಯಕ ಅಭಿಯೋಗ ನಿರ್ದೇಶಕರ ಕಛೇರಿ, ಬಾಗಲಕೋಟೆ	–ಅದೇ–	–ಅದೇ–

	ದಲ್ಾಯತ್	01	–ಅದೇ–	–ಅದೇ–	–ಅದೇ–
82	—ಯಕ ಅಭಿಯೋಗ ರ್ದೇಶಕರು	01	ಆರಕ್ಷಕ ಅಧೀಕ್ಷಕರ ಕಛೇರಿ, ದಾವಣಗೆರೆ	–ಅದೇ–	–ಅದೇ–
	ೀಘ್ರಲಿಪಿಗಾರರು	01	ಸಹಾಯಕ ಅಭಿಯೋಗ ನಿರ್ದೇಶಕರ ಕಛೇರಿ, ದಾವಣಗೆರೆ	–ಅದೇ–	–ಅದೇ–
	ದಲಾಯತ್	01	–ಅದೇ–	–ಅದೇ–	–ಅದೇ–
׀01	ಸಹಾಯಕ ಅಭಿಯೋಗ ನಿರ್ದೇಶಕರು	01	ಆರಕ್ಷಕ ಅಧೀಕ್ಷಕರ ಕಛೇರಿ, ಕೊಪ್ಪಳ	–ಅದೇ–	–ಅದೇ–
	ಶೀಘ್ರಲಿಪಿಗಾರರು	01	ಸಹಾಯಕ ಅಭಿಯೋಗ ನಿರ್ದೇಶಕರ ಕಛೇರಿ, ಕೊಪ್ಪಳ	–ಅದೇ–	–ಅದೇ–
102	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಹಿವಿ) ಮತ್ತು ಸಿಜೆಎಂ ನ್ಯಾಯಾಲಯ, ಗದಗ	–ಅದೇ–	–ಅದೇ–
103	ಸರ್ಕಾರಿ ಅಭಿಯೋಜಕರು	01	ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಗದಗ	–ಅದೇ–	–ಅದೇ–
	ಅಧೀಕ್ಷಕರು	01	ಸರ್ಕಾರಿ ಅಭಿಯೋಜಕರ ಕಛೇರಿ, ಗದಗ	–ಅದೇ–	–ಅದೇ–
	ಪ್ರಥಮ ದರ್ಜೆ ಸಹಾಯಕರು	01	–ಅದೇ–	–ಅದೇ–	–ಅದೇ–
	ಶೀಘ್ರಲಿಪಿಗಾರರು	01	–ಅದೇ–	–ಅದೇ–	–ಅದೇ–
	ಅಟೆಂಡರ್	01	–ಅದೇ–	–ಅದೇ–	–ಅದೇ–
104	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಹಿವಿ) ಮತ್ತು ಸಿಜೆಎಂ ನ್ಯಾಯಾಲಯ, ಹಾವೇರಿ	–ಅದೇ–	–ಅದೇ–
	ಅಧೀಕ್ಷಕರು	01	ಸರ್ಕಾರಿ ಅಭಿಯೋಜಕರ ಕಛೇರಿ, ಹಾವೇರಿ	–ಅದೇ–	–ಅದೇ–
	ಪ್ರಥಮ ದರ್ಜೆ ಸಹಾಯಕರು	01	–ಅದೇ–	–ಅದೇ–	–ಅದೇ–
	ಶೀಘ್ರಲಿಪಿಗಾರರು	01	–ಅದೇ–	–ಅದೇ–	–ಅದೇ–
	ಅಟೆಂಡರ್	01	–ಅದೇ–	–ಅದೇ–	–ಅದೇ–
105	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಹಿವಿ) ಮತ್ತು ಸಿಜೆಎಂ ನ್ಯಾಯಾಲಯ, ಬಾಗಲಕೋಟೆ	–ಅದೇ–	–ಅದೇ–
	ಅಧೀಕ್ಷಕರು	01	ಸರ್ಕಾರಿ ಅಭಿಯೋಜಕರ ಕಛೇರಿ, ಬಾಗಲಕೋಟೆ	–ಅದೇ–	–ಅದೇ–
	ಪ್ರಥಮ ದರ್ಜೆ ಸಹಾಯಕರು	01	–ಅದೇ–	–ಅದೇ–	–ಅದೇ–
	ಅಟೆಂಡರ್	01	–ಅದೇ–	–ಅದೇ–	–ಅದೇ–
106	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಹಿವಿ) ಮತ್ತು ಸಿಜೆಎಂ ನ್ಯಾಯಾಲಯ, ದಾವಣಗೆರೆ	–ಅದೇ–	–ಅದೇ–
107	ಸರ್ಕಾರಿ ಅಭಿಯೋಜಕರು	01	ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ದಾವಣಗೆರೆ	–ಅದೇ–	–ಅದೇ–
	ಅಧೀಕ್ಷಕರು	01	ಸರ್ಕಾರಿ ಅಭಿಯೋಜಕರ ಕಛೇರಿ, ದಾವಣಗೆರೆ	–ಅದೇ–	–ಅದೇ–
	ಪ್ರಥಮ ದರ್ಜೆ ಸಹಾಯಕರು	01	–ಅದೇ–	–ಅದೇ–	–ಅದೇ–
	ಶೀಘ್ರಲಿಪಿಗಾರರು	01	–ಅದೇ–	–ಅದೇ–	–ಅದೇ–
	ಅಟೆಂಡರ್	01	–ಅದೇ–	–ಅದೇ–	–ಅದೇ–
108	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಹಿವಿ) ಮತ್ತು ಸಿಜೆಎಂ ನ್ಯಾಯಾಲಯ ಕೊಪ್ಪಳ	–ಅದೇ–	–ಅದೇ–
	ಅಧೀಕ್ಷಕರು	01	ಸರ್ಕಾರಿ ಅಭಿಯೋಜಕರ ಕಛೇರಿ, ಕೊಪ್ಪಳ	–ಅದೇ–	–ಅದೇ–
	ಪ್ರಥಮ ದರ್ಜೆ ಸಹಾಯಕರು	01	–ಅದೇ–	–ಅದೇ–	–ಅದೇ–

	ಶೀಘ್ರಲಿಪಿಗಾರರು	01	-ಅದೇ-	-ಅದೇ-	-ಅದೇ-
	ಅಟೆಂಡರ್	01	-ಅದೇ-	-ಅದೇ-	
109	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಚನ್ನಪಟ್ಟಣ	-ಅದೇ-	ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಚನ್ನಪಟ್ಟಣ	-ಅದೇ-	-ೀ-
110	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರು	01	ಅಧಿಕ ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಕೆ.ಜಿ.ಎಫ್.	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಕೆ.ಜಿ.ಎಫ್.	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
111	3ನೇ ಅಧಿಕ ಸರ್ಕಾರಿ ಅಭಿಯೋಜಕರು	01	3ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಳಗಾವಿ	-ಅದೇ-	-ಅದೇ-
	ಶೀಘ್ರಲಿಪಿಗಾರರು	01	3ನೇ ಅಧಿಕ ಸರ್ಕಾರಿ ಅಭಿಯೋಜಕರ ಕಛೇರಿ ಬೆಳಗಾವಿ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
112	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮುಳಬಾಗಿಲು	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಮುಳಬಾಗಿಲು	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
113	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ದಾಂಡೇಲಿ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ದಾಂಡೇಲಿ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
114	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಅರಕಲಗೂಡು	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಅರಕಲಗೂಡು	-ಅದೇ-	-ಅದೇ-
115	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಲೂರು	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಮಾಲೂರು	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
116	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಕನಕಪುರ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಕನಕಪುರ	-ಅದೇ-	-ಅದೇ-
117	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ 3ನೇ ನ್ಯಾಯಾಲಯ ಬೆಳಗಾವಿ	-ಅದೇ-	-ಅದೇ-
118	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮೊಳಕಾಲ್ಮೂರು	-ಅದೇ-	-ಅದೇ-
119	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಶಿಡ್ಲಘಟ್ಟ	-ಅದೇ-	-ಅದೇ-
120	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಹಿರಿಯೂರು	-ಅದೇ-	-ಅದೇ-

	...ರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಹಿರಿಯೂರು	-ಅದೇ-	-ಅದೇ-
82	ದಲಾಯತ್	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಹಿರಿಯೂರು	-ಅದೇ-	-ಅದೇ-
	...ಕ ಸರ್ಕಾರಿ ಅಭಿಯೋಜಕರು	01	ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ಚಿತ್ರದುರ್ಗ	-ಅದೇ-	-ಅದೇ-
01	ಶೀಘ್ರಲಿಪಿಗಾರರು	01	ಅಧಿಕ ಸರ್ಕಾರಿ ಅಭಿಯೋಜಕರ ಕಛೇರಿ ಚಿತ್ರದುರ್ಗ	-ಅದೇ-	-ಅದೇ-
122	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಹೊಳಲ್ಕೆರೆ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಹೊಳಲ್ಕೆರೆ	-ಅದೇ-	-ಅದೇ-
	ದಲಾಯತ್	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಹೊಳಲ್ಕೆರೆ	-ಅದೇ-	-ಅದೇ-
123	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಶ್ರೀನಿವಾಸಪುರ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಶ್ರೀನಿವಾಸಪುರ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
124	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಬೇಲೂರು	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಬೇಲೂರು	-ಅದೇ-	-ಅದೇ-
125	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಹೊಸಕೋಟೆ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಹೊಸಕೋಟೆ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
126	2ನೇ ಅಧಿಕ ಸರ್ಕಾರಿ ಅಭಿಯೋಜಕರು	01	2ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮಂಗಳೂರು	-ಅದೇ-	-ಅದೇ-
	ಶೀಘ್ರಲಿಪಿಗಾರರು	01	2ನೇ ಅಧಿಕ ಸರ್ಕಾರಿ ಅಭಿಯೋಜಕರ ಕಛೇರಿ, ಮಂಗಳೂರು	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
127	ಅಧಿಕ ಸರ್ಕಾರಿ ಅಭಿಯೋಜಕರು	01	ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಹಾಸನ	-ಅದೇ-	-ಅದೇ-
	ಶೀಘ್ರಲಿಪಿಗಾರರು	01	ಅಧಿಕ ಸರ್ಕಾರಿ ಅಭಿಯೋಜಕರ ಕಛೇರಿ, ಹಾಸನ	-ಅದೇ-	-ಅದೇ-
128	3ನೇ ಹೆಚ್ಚುವರಿ ಸರ್ಕಾರಿ ಅಭಿಯೋಜಕರು	01	3ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ತುಮಕೂರು	-ಅದೇ-	-ಅದೇ-
	ಅಧೀಕ್ಷಕರು	01	3ನೇ ಹೆಚ್ಚುವರಿ ಸರ್ಕಾರಿ ಅಭಿಯೋಜಕರ ಕಛೇರಿ ತುಮಕೂರು	-ಅದೇ-	-ಅದೇ-
	ಪ್ರಥಮ ದರ್ಜೆ ಸಹಾಯಕರು	01	-ಅದೇ-	-ಅದೇ-	-ಅದೇ-
	ಶೀಘ್ರಲಿಪಿಗಾರರು	01	-ಅದೇ-	-ಅದೇ-	-ಅದೇ-
	ಬೆರಳಚ್ಚುಗಾರರು	01	-ಅದೇ-	-ಅದೇ-	-ಅದೇ-
	ಅಟೆಂಡರ್	01	-ಅದೇ-	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
129	ಸಹಾಯಕ ಸರ್ಕಾರಿ ಅಭಿಯೋಜಕರು	01	ಹೆಚ್ಚುವರಿ ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಬೈಲಹೊಂಗಲ	-ಅದೇ-	-ಅದೇ-

	ಬೆರಳಚ್ಚುಗಾರ-ವ-ಸಹಾಯಕ	01	ಹೆಚ್ಚುವರಿ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಬೈಲಹೊಂಗಲ	-ಅದೇ-	-ಅದೇ-
130	ಸಹಾಯಕ ಸರ್ಕಾರಿ ಅಭಿಯೋಜಕರು	01	ಹೆಚ್ಚುವರಿ ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಖಾನಾಪುರ	-ಅದೇ-	-ಅದೇ-
131	ಸರ್ಕಾರಿ ಅಭಿಯೋಜಕರು	01	ಎನ್‌ಡಿಪಿಎಸ್. ನ್ಯಾಯಾಲಯ ಬೆಂಗಳೂರು	-ಅದೇ-	-ಅದೇ-
	ಪ್ರಥಮ ದರ್ಜೆ ಸಹಾಯಕರು	01	ಸರ್ಕಾರಿ ಅಭಿಯೋಜಕರ ಕಛೇರಿ, ವಿಶೇಷ ಎನ್‌ಡಿಪಿಎಸ್. ನ್ಯಾಯಾಲಯ ಬೆಂಗಳೂರು	-ಅದೇ-	-ಅದೇ-
	ಶೀಘ್ರಲಿಪಿಗಾರರು	01	-ಅದೇ-	-ಅದೇ-	-ಅದೇ-
132	ಸಹಾಯಕ ಸರ್ಕಾರಿ ಅಭಿಯೋಜಕರು	01	ಹೆಚ್ಚುವರಿ ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಹಾವೇರಿ	-ಅದೇ-	-ಅದೇ-
	ಬೆರಳಚ್ಚುಗಾರ -ವ- ಸಹಾಯಕ	01	ಹೆಚ್ಚುವರಿ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಹಾವೇರಿ	-ಅದೇ-	-ಅದೇ-
133	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಂಕೇಶ್ವರ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
134	ಸರ್ಕಾರಿ ಅಭಿಯೋಜಕರು	01	ಚರ್ಚ್ ಬಾಂಬ್ ಸ್ಫೋಟ/ನಕಲಿ ಛಾಪಾ ಕಾಗದ/ ಕಂಬಾಲಪಲ್ಲಿ ಪ್ರಕರಣ, ವಿಶೇಷ ನ್ಯಾಯಾಲಯ ಬೆಂಗಳೂರು	-ಅದೇ-	-ಅದೇ-
	ಪ್ರಥಮ ದರ್ಜೆ ಸಹಾಯಕರು	03	ವಿಶೇಷ ನ್ಯಾಯಾಲಯ ಸರ್ಕಾರಿ ಅಭಿಯೋಜಕರ ಕಛೇರಿ, ಬೆಂಗಳೂರು	-ಅದೇ-	-ಅದೇ-
	ಶೀಘ್ರಲಿಪಿಗಾರರು	03	-ಅದೇ-	-ಅದೇ-	-ಅದೇ-
	ಅಟೆಂಡರ್	03	-ಅದೇ-	-ಅದೇ-	-ಅದೇ-
135	ಆಡಳಿತಾಧಿಕಾರಿ	01	ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಬೆಂಗಳೂರು	-ಅದೇ-	-ಅದೇ-
136	ಲೆಕ್ಕ ಪತ್ರ ಅಧೀಕ್ಷಕರು	01	ಅಭಿಯೋಗ ಮತ್ತು ಸರ್ಕಾರಿ ವ್ಯಾಜ್ಯಗಳ ನಿರ್ದೇಶಕರ ಕಛೇರಿ, ಬೆಂಗಳೂರು	-ಅದೇ-	-ಅದೇ-
137	ಶೀಘ್ರಲಿಪಿಗಾರರು	01	ಸರ್ಕಾರಿ ಅಭಿಯೋಜಕರು 3ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಧಾರವಾಡ	-ಅದೇ-	-ಅದೇ-
	ಬೆರಳಚ್ಚುಗಾರರು	08	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಜಗಳೂರು, ಚಳ್ಳಕೆರೆ, ಜೇವರ್ಗಿ, ಅಫಜಲಪುರ ನಿಪ್ಪಾಣಿ, ಅಥಣಿ, ಹಾಗೂ ಮುಧೋಳ	-ಅದೇ-	-ಅದೇ-
	ದಲಾಯತ್	08	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಜಗಳೂರು, ಚಳ್ಳಕೆರೆ, ಜೇವರ್ಗಿ, ಅಫಜಲಪುರ ನಿಪ್ಪಾಣಿ, ಅಥಣಿ, ಮದ್ದೂರು ಹಾಗೂ ಮುಧೋಳ	-ಅದೇ-	-ಅದೇ-
	ದಲಾಯತ್	01	ಸರ್ಕಾರಿ ಅಭಿಯೋಜಕರು, 3ನೇ ಅಧಿಕ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಧಾರವಾಡ	-ಅದೇ-	-ಅದೇ-
138	ಸಹಾಯಕ ಸರ್ಕಾರಿ ಅಭಿಯೋಜಕರು	01	ಅಧಿಕ ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಸಿಂಧನೂರು	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಸಿಂಧನೂರು	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
139	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಮೂಡಬಿದರೆ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಮೂಡಬಿದರೆ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-

140	ಸಹಾಯಕ ಸರ್ಕಾರಿ ಅಭಿಯೋಜಕರು	01	ಅಧಿಕ ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಚಿಕ್ಕಮಗಳೂರು	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಚಿಕ್ಕಮಗಳೂರು	-ಅದೇ-	-ಅದೇ-
	ದಲಾಯತ್	01	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಚಿಕ್ಕಮಗಳೂರು	-ಅದೇ-	-ಅದೇ-
141	ಸಹಾಯಕ ಸರ್ಕಾರಿ ಅಭಿಯೋಜಕರು	01	ಸಿಜೆ(ಕಿವಿ) ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ಬಂಗಾರಪೇಟೆ	-ಅದೇ-	-ಅದೇ-
	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಬಂಗಾರಪೇಟೆ	-ಅದೇ-	-ಅದೇ-
	ದಲಾಯತ್	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಬಂಗಾರಪೇಟೆ	-ಅದೇ-	-ಅದೇ-
142	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಸಕಲೇಶಪುರ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
143	ಬೆರಳಚ್ಚುಗಾರ-ವ-ಸಹಾಯಕ	01	ಅಧಿಕ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಬಿಜಾಪುರ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
144	ಬೆರಳಚ್ಚುಗಾರ-ವ-ಸಹಾಯಕ	01	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಕನಕಪುರ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
145	ಬೆರಳಚ್ಚುಗಾರ-ವ-ಸಹಾಯಕ	01	ಅಧಿಕ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ರಾಮನಗರ	-ಅದೇ-	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
146	ಬೆರಳಚ್ಚುಗಾರ-ವ-ಸಹಾಯಕ	01	ಸಿಜೆ (ಹಿ.ವಿ.) ಮತ್ತು ಜೆಎಂಎಫ್‌ಸಿ ನ್ಯಾಯಾಲಯದ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ ಬೇಲೂರು	ಒಇ 235 ಪಿಪಿಇ 2008 ದಿ: 04-02-2009	-ಅದೇ-
	ದಲಾಯತ್	01	-ಅದೇ-	-ಅದೇ-	-ಅದೇ-
147	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ (ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹೊಸಕೋಟೆ.	ಒಇ 530 ಪಿಪಿಇ 2008, ದಿ ; 18-02-2009	-ಅದೇ-
148	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ದೊಡ್ಡಬಳ್ಳಾಪುರ	-ಅದೇ-	-ಅದೇ-
149	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ದೇವನಹಳ್ಳಿ	-ಅದೇ-	-ಅದೇ-
150	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	2ನೇ ಅಧಿಕ (ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ತುಮಕೂರು	-ಅದೇ-	-ಅದೇ-
151	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. 4ನೇ ನ್ಯಾಯಾಲಯ, ತುಮಕೂರು	-ಅದೇ-	-ಅದೇ-
152	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಗುಬ್ಬಿ	-ಅದೇ-	-ಅದೇ-

153	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಧಿಕ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಧುಗಿರಿ	-ಅದೇ-	-ಅದೇ-
154	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿಕ್ಕನಾಯಕನಹಳ್ಳಿ	-ಅದೇ-	-ಅದೇ-
155	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚನ್ನಪಟ್ಟಣ	-ಅದೇ-	-ಅದೇ-
156	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ರಾಮನಗರ	-ಅದೇ-	-ಅದೇ-
157	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕನಕಪುರ	-ಅದೇ-	-ಅದೇ-
158	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಪ್ರಧಾನ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕೋಲಾರ	-ಅದೇ-	-ಅದೇ-
159	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	2ನೇ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕೋಲಾರ	-ಅದೇ-	-ಅದೇ-
160	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಾಲೂರು	-ಅದೇ-	-ಅದೇ-
161	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕೆ.ಜಿ.ಎಫ್.	-ಅದೇ-	-ಅದೇ-
162	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಶ್ರೀರಂಗಪಟ್ಟಣ	-ಅದೇ-	-ಅದೇ-
163	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಪ್ರಧಾನ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಶ್ರೀರಂಗಪಟ್ಟಣ	-ಅದೇ-	-ಅದೇ-
164	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ನಾಗಮಂಗಲ	-ಅದೇ-	-ಅದೇ-
165	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹೊಳೆನರಸೀಪುರ	-ಅದೇ-	-ಅದೇ-
166	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಅರಸೀಕೆರೆ	-ಅದೇ-	-ಅದೇ-
167	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	1ನೇ ಅಧಿಕ 1ನೇ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮೈಸೂರು	-ಅದೇ-	-ಅದೇ-
168	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಅಧಿಕ 1ನೇ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮೈಸೂರು	-ಅದೇ-	-ಅದೇ-
169	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಪ್ರಧಾನ 1ನೇ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮೈಸೂರು	-ಅದೇ-	-ಅದೇ-

170	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	5ನೇ ಅಧಿಕ 1ನೇ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮೈಸೂರು	-ಅದೇ-	-ಅದೇ-
171	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕುಮಟಾ	-ಅದೇ-	-ಅದೇ-
172	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಳವಳ್ಳಿ	-ಅದೇ-	-ಅದೇ-
173	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕೊಳ್ಳೇಗಾಲ	-ಅದೇ-	-ಅದೇ-
174	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹುಣಸೂರು	-ಅದೇ-	-ಅದೇ-
175	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಅರಕಲಗೂಡು	-ಅದೇ-	-ಅದೇ-
176	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	2ನೇ ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕಡೂರು	-ಅದೇ-	-ಅದೇ-
177	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚನ್ನರಾಯಪಟ್ಟಣ	-ಅದೇ-	-ಅದೇ-
178	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಸಕಲೇಶಪುರ	-ಅದೇ-	-ಅದೇ-
179	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬೇಲೂರು	-ಅದೇ-	-ಅದೇ-
180	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಹೆಚ್ಚುವರಿ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಂಗಳೂರು	-ಅದೇ-	-ಅದೇ-
181	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬಂಟ್ವಾಳ	-ಅದೇ-	-ಅದೇ-
182	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಭಟ್ಕಳ	-ಅದೇ-	-ಅದೇ-
183	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಉಡುಪಿ	-ಅದೇ-	-ಅದೇ-
184	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಹೆಚ್ಚುವರಿ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಪುತ್ತೂರು	-ಅದೇ-	-ಅದೇ-
185	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಹೆಚ್ಚುವರಿ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿಕ್ಕಮಗಳೂರು	-ಅದೇ-	-ಅದೇ-
186	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹೊನ್ನಾವರ	-ಅದೇ-	-ಅದೇ-

187	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	2ನೇ ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಕುಂದಾಪುರ	-ಅದೇ-	-ಅದೇ-
188	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಹೆಚ್ಚುವರಿ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ದಾವಣಗೆರೆ	-ಅದೇ-	-ಅದೇ-
189	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬಳ್ಳಾರಿ	-ಅದೇ-	-ಅದೇ-
190	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚೆನ್ನಗಿರಿ	-ಅದೇ-	-ಅದೇ-
191	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಪರ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಸಾಗರ	-ಅದೇ-	-ಅದೇ-
192	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹಿರಿಯೂರು	-ಅದೇ-	-ಅದೇ-
193	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಶಿವಮೊಗ್ಗ	-ಅದೇ-	-ಅದೇ-
194	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹರಪನಹಳ್ಳಿ	-ಅದೇ-	-ಅದೇ-
195	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮುದ್ದೇಬಿಹಾಳ್	-ಅದೇ-	-ಅದೇ-
196	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಹಾನಗಲ್	-ಅದೇ-	-ಅದೇ-
197	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಪ್ರಧಾನ ಸಿ.ಜೆ.(ಕಿ.ವಿ.) ಮತ್ತು ಪ್ರಧಾನ ಜೆ.ಎಂ.ಎಫ್.ಸಿ. ನ್ಯಾಯಾಲಯ, ಧಾರವಾಡ	-ಅದೇ-	-ಅದೇ-
198	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	1ನೇ ಅಪರ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಧಾರವಾಡ	-ಅದೇ-	-ಅದೇ-
199	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಇಂಡಿ	-ಅದೇ-	-ಅದೇ-
200	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಸಿಂಧಗಿ	-ಅದೇ-	-ಅದೇ-
201	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ರಾಮದುರ್ಗ	-ಅದೇ-	-ಅದೇ-
202	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಖಾನಾಪುರ	-ಅದೇ-	-ಅದೇ-
203	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ರಾಯಭಾಗ	-ಅದೇ-	-ಅದೇ-

204	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಜಮಖಂಡಿ	-ಅದೇ-	-ಅದೇ-
205	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	2ನೇ ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿಕ್ಕೋಡಿ	-ಅದೇ-	-ಅದೇ-
206	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	3ನೇ ಹೆಚ್ಚುವರಿ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಬಿಜಾಪುರ	-ಅದೇ-	-ಅದೇ-
207	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	4ನೇ ಅಧಿಕ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಗುಲ್ಬರ್ಗ	-ಅದೇ-	-ಅದೇ-
208	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	5ನೇ ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಗುಲ್ಬರ್ಗ	-ಅದೇ-	-ಅದೇ-
209	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚಿಂಚೋಳಿ	-ಅದೇ-	-ಅದೇ-
210	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಧಿಕ ಸಿ.ಜೆ.(ಕಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಆಳಂದ್	-ಅದೇ-	-ಅದೇ-
211	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಯಲಬುರ್ಗ	-ಅದೇ-	-ಅದೇ-
212	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಲಿಂಗಸಗೂರ	-ಅದೇ-	-ಅದೇ-
213	ಸಹಾಯಕ ಸರ್ಕಾರಿ ಅಭಿಯೋಜಕರು-ವ-ಸಹಾಯಕ ಸರ್ಕಾರಿ ವಕೀಲರು	01	ಅಧಿಕ ಸಿ.ಜೆ.(ಹಿ.ವಿ.) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ರಾಯಚೂರು	-ಅದೇ-	-ಅದೇ-
214	ಬೆರಳಚ್ಚುಗಾರ-ವ-ಸಹಾಯಕ	01	ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಸಿವಿಲ್ ನ್ಯಾಯಾಧೀಶರ (ಹಿರಿಯ ವಿಭಾಗ) ಮತ್ತು ಸಿ.ಜೆ.ಎಂ. ನ್ಯಾಯಾಲಯ, ಚಾಮರಾಜನಗರ.	ಒಇ 48 ಪಿಪಿಇ 2006 ದಿ : 22-04-2009	31-03-2011
	ದಲಾಯತ್	01	-ಅದೇ-	-ಅದೇ-	-ಅದೇ-
215	ಬೆರಳಚ್ಚುಗಾರ-ವ-ಸಹಾಯಕ	01	ಸಹಾಯಕ ಸರ್ಕಾರಿ ಅಭಿಯೋಜಕರ ಕಛೇರಿ, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ (ಕಿರಿಯ ವಿಭಾಗ) ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಚನ್ನರಾಯಪಟ್ಟಣ	ಒಇ 48 ಪಿಪಿಇ 2006	31-03-2011
	ದಲಾಯತ್	01	-ಅದೇ-	-ಅದೇ-	-ಅದೇ-
		744			

ಕೆ.ಸಿ. ಸಿದ್ದಪ್ಪ

ಸರ್ಕಾರದ ಅಧೀನ ಕಾರ್ಯದರ್ಶಿ,

ಒಳಾಡಳಿತ ಇಲಾಖೆ

(ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಕಾಫಿ ಪೋಸ ಮತ್ತು ಅಭಿಯೋಗಗಳು)

ಪಿ.ಆರ್. 1731

ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಸಚಿವಾಲಯ

ವಿಷಯ : ರಾಮನಗರ ಕಂದಾಯ ತಾಲ್ಲೂಕಿನಲ್ಲಿ ಖಾಲಿ ಇರುವ ನೋಟರಿ ಹುದ್ದೆಯನ್ನು ಭರ್ತಿ ಮಾಡುವ ಬಗ್ಗೆ (ಶ್ರೀ ಹೆಚ್. ವಿ. ಶೇಷಾದ್ರಿ ಅಯ್ಯರ್, ನೋಟರಿ, ರಾಮನಗರ ಇವರ ರಾಜೀನಾಮೆಯಿಂದ ತೆರವು)

ಓದಲಾಗಿದೆ :
1. ಸರ್ಕಾರದ ಪತ್ರ ಸಂಖ್ಯೆ ಲಾ 122 ಎಲ್‌ಸಿಎಲ್ 09 ದಿನಾಂಕ : 14-12-2009 ಹಾಗೂ 01-03-2010
2. ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು, ರಾಮನಗರ ಇವರ ಪತ್ರ ಸಂಖ್ಯೆ : ಎಡಿಎಂ/10/2010 ದಿನಾಂಕ : 15-04-2010
3. ನೋಟರಿಗಳ ತಿದ್ದುಪಡಿ ನಿಯಮಗಳು 2009ರ ಅಧಿಸೂಚನೆ ಸಂ. ಜಿಎಸ್‌ಆರ್ 114(ಇ) ದಿನಾಂಕ : 24-02-2009
4. ಅಧಿಸೂಚನೆ ಲಾ 61 ಎಲ್‌ಸಿಎಲ್ 09 ದಿನಾಂಕ : 18-07-2009
5. ಸಂದರ್ಶನ ಸೂಚನಾ ಪತ್ರ ಸಂಖ್ಯೆ : ಲಾ 122 ಎಲ್‌ಸಿಎಲ್ 2009 ದಿನಾಂಕ : 19-05-2010

ಪ್ರಸ್ತಾವನೆ :

ರಾಮನಗರ ಕಂದಾಯ ತಾಲ್ಲೂಕಿನಲ್ಲಿ ನೋಟರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಹೆಚ್. ವಿ. ಶೇಷಾದ್ರಿ ಅಯ್ಯರ್, ಇವರ ರಾಜೀನಾಮೆಯಿಂದ ತೆರವಾದ ನೋಟರಿ ಹುದ್ದೆಯನ್ನು ಭರ್ತಿ ಮಾಡಲು ನೋಟರಿಗಳ ಅಧಿನಿಯಮ/ನಿಯಮಗಳು ಹಾಗೂ ಕಾನೂನು ಅಧಿಕಾರಿಗಳ (ನೇಮಕಾತಿ ಮತ್ತು ಸೇವಾ ಷರತ್ತು) ನಿಯಮಗಳಡಿಯಲ್ಲಿ ಪರಿಶೀಲಿಸಿ ಸೂಕ್ತ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ರಾಮನಗರ ಇವರನ್ನು ಮೇಲೆ (1) ರಲ್ಲಿ ಓದಲಾದ ದಿನಾಂಕ : 14-12-2009 ಹಾಗೂ 01-03-2010ರ ಪತ್ರಗಳಲ್ಲಿ ಕೋರಲಾಗಿತ್ತು. ಅದರಂತೆ ಮೇಲೆ (2) ರಲ್ಲಿ ಓದಲಾದ ದಿನಾಂಕ 15-04-2010ರ ಪತ್ರದಲ್ಲಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ರಾಮನಗರ ಇವರು 20 ಜನರ ಮೆಮೋರಿಯಲ್ಸ್‌ಗಳನ್ನೊಳಗೊಂಡ ಪ್ರಸ್ತಾವನೆಯನ್ನು ಸಲ್ಲಿಸಿದ್ದರು. ಆ ಪ್ರಸ್ತಾವನೆಯನ್ನು ಮೇಲೆ (3) ರಲ್ಲಿ ಓದಲಾದ ನೋಟರಿಗಳ ತಿದ್ದುಪಡಿ ನಿಯಮಗಳು 2009 ರನ್ವಯ ಕರ್ನಾಟಕ ರಾಜ್ಯದಿಂದ ನೋಟರಿಗಳ ನೇಮಕಕ್ಕಾಗಿ ಮೇಲೆ (4) ರಲ್ಲಿ ಓದಲಾದ ದಿನಾಂಕ : 18-07-2009ರ ಅಧಿಸೂಚನೆಯಲ್ಲಿ ರಚಿಸಲಾಗಿರುವ ಸಂದರ್ಶನ ಮಂಡಳಿಯ ಪರಿಶೀಲನೆಗೆ ಕಳಿಸಿ ಎಲ್ಲಾ ಅಭ್ಯರ್ಥಿಗಳನ್ನು ಸಂದರ್ಶನ ಮಂಡಳಿಯ ಮುಂದೆ ಸಂದರ್ಶನಕ್ಕೆ ಹಾಜರಾಗುವಂತೆ ಮೇಲೆ (5)ರಲ್ಲಿ ಓದಲಾದ ದಿನಾಂಕ : 19-05-2010ರ ಸಂದರ್ಶನ ಸೂಚನಾ ಪತ್ರದಲ್ಲಿ ಸೂಚಿಸಲಾಗಿತ್ತು. ಅದರಂತೆ ಸಂದರ್ಶನ ಮಂಡಳಿಯು ಸಂದರ್ಶನ ನಡೆಸಿ ದಿನಾಂಕ 02-06-2010ರಂದು ಆಯ್ಕೆ ಪಟ್ಟಿಯನ್ನು ಸಲ್ಲಿಸಿದೆ.

ಸಂದರ್ಶನಾ ಮಂಡಳಿಯ ಶಿಫಾರಸ್ಸನ್ನು ಸರ್ಕಾರವು ಪರಿಗಣಿಸಿದೆ. ಅದರಂತೆ ಈ ಆದೇಶ

ಸರ್ಕಾರದ ಆದೇಶ ಸಂಖ್ಯೆ : ಲಾ 122 ಎಲ್‌ಸಿಎಲ್ 2009, ಬೆಂಗಳೂರು, ದಿನಾಂಕ : 23 ನೇ ಜೂನ್ 2010

ನೋಟರಿ ಅಧಿನಿಯಮ (1952) ಹಾಗೂ ಇದರ ಅಡಿಯಲ್ಲಿ ರಚಿಸಲಾಗಿರುವ ನೋಟರಿ ನಿಯಮಗಳು (1956) ಹಾಗೂ ತಿದ್ದುಪಡಿ ನಿಯಮಗಳು 2009ರನ್ವಯ ನಿಯಮ 8(1)ರಲ್ಲಿ ಪ್ರದತ್ತವಾಗಿರುವ ಅಧಿಕಾರದಂತೆ ಶ್ರೀ ಜೆ.ಕೆ. ರಂಗಸ್ವಾಮಿ, ವಕೀಲರು, ಬಿನ್ ಕೆಂಚರಂಗೇಗೌಡ, ನಂ. 1684, ಮಲ್ಲೇಶ್ವರ ಟೆಂಪಲ್ ರಸ್ತೆ ಐಜೂರ್ ಬಡಾವಣೆ ರಾಮನಗರ-571511 ಇವರನ್ನು ವೃತ್ತಿ ಪ್ರಮಾಣ ಪತ್ರ ನೀಡಲಾದ ದಿನಾಂಕದಿಂದ ಐದು ವರ್ಷಗಳ ಅವಧಿಗೆ ರಾಮನಗರ ಕಂದಾಯ ತಾಲ್ಲೂಕಿನ ನೋಟರಿಯನ್ನಾಗಿ ನೇಮಿಸಿದೆ.

ಸದರಿ ವಕೀಲರು ಲೆಕ್ಕ ಶೀರ್ಷಿಕೆ 0070-ಇತರೆ ಆಡಳಿತಾತ್ಮಕ ಸೇವೆಗಳು-01-ನ್ಯಾಯಪರಿಪಾಲನೆ-501-0-ಇತರೆ ಸ್ವೀಕೃತಿಗಳು-06 ಇತರೆ ಬಾಬುಗಳಿಗೆ 0070-01-501-0-06) ನೋಟರಿ ನಿಯಮಗಳಲ್ಲಿ ನಿಗಧಿಪಡಿಸಲಾದ ರೂ. 1000.00 (ಒಂದು ಸಾವಿರಗಳು ಮಾತ್ರ) ಶುಲ್ಕವನ್ನು ಸರ್ಕಾರಿ ಖಜಾನೆಯಲ್ಲಿ ಜಮಾ ಮಾಡಿ ಆ ಬಗೆಗಿನ ಮೂಲ ಚಲನ್ ಮತ್ತು ಹುಟ್ಟಿದ ದಿನಾಂಕವನ್ನು ದೃಢೀಕರಿಸಬಲ್ಲ ದಾಖಲೆಯನ್ನು ಹಾಜರುಪಡಿಸಿದ ನಂತರ ಅವರಿಗೆ ವೃತ್ತಿ ಪ್ರಮಾಣ ಪತ್ರ ನೀಡಲಾಗುವುದು.

ವೃತ್ತಿ ಪ್ರಮಾಣ ಪತ್ರ ನೀಡಿದ ನಂತರ ಶ್ರೀಯುತರ ಹೆಸರನ್ನು ನೋಟರಿ ಅಧಿನಿಯಮ (1952)ರ ಕಲಂ 4ನೇ ಪ್ರಕರಣದಡಿ ಸರ್ಕಾರ ನಿರ್ವಹಿಸುತ್ತಿರುವ ಪಟ್ಟಿಯಲ್ಲಿ ನಮೂದಿಸಲಾಗುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್. ಎನ್. ಕೃಷ್ಣಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ (ಆಡಳಿತ-2),
ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆ

ಪಿ.ಆರ್. 1739

ಜಲಸಂಪನ್ಮೂಲ ಸಚಿವಾಲಯ

ವಿಷಯ : ಯಾದಗಿರಿ ಜಿಲ್ಲೆ ಹಾಗೂ ತಾಲ್ಲೂಕಿನ ಆರ್.ಆರ್.ಆರ್. ಯೋಜನೆಯಡಿಯ (ಪ್ಯಾಕೇಜ್-08) ಕಾಮಗಾರಿಗಳ ಟೆಂಡರ್ ಅನುಮೋದನೆ ಕುರಿತು.

ಓದಲಾಗಿದೆ :
1. ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರ ಪತ್ರದ ಸಂಖ್ಯೆ: ಮುಇಂ/ಸನಿ(ಉ) ವ/ಬಿಜಾ/ಎಇ-5/2010-11/5502 ದಿನಾಂಕ: 6-10-2010.
2. ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು ರವರ ದಿನಾಂಕ: 28-10-2010ರ ಪತ್ರ ಸಂಖ್ಯೆ: ಮುಸದ/ಆಪ್ತಶಾಖೆ/ಟೆಂಡರ್/09-10/3112.

ಪ್ರಸ್ತಾವನೆ :

ಆರ್.ಆರ್.ಆರ್. ಕಾರ್ಯಕ್ರಮದಡಿ ಭಾರತ ಸರ್ಕಾರದ ಅನುಮೋದನೆ ದೊರಕಿರುವ 375 ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಪೈಕಿ ಯಾದಗಿರಿ ಜಿಲ್ಲೆ ಹಾಗೂ ತಾಲ್ಲೂಕಿನ ಕೆಳಕಂಡ ಕಾಮಗಾರಿಗಳು ಸೇರಿದ್ದು, ಅವುಗಳಿಗೆ ನೀಡಲಾಗಿರುವ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ವಿವರಗಳು ಕೆಳಕಂಡಂತಿವೆ.

ಕಾಮಗಾರಿ ಹೆಸರು	ಭಾರತ ಸರ್ಕಾರದಿಂದ ಅನುಮೋದನೆಯಾಗಿರುವ ಮೊತ್ತ ರೂ. ಲಕ್ಷಗಳಲ್ಲಿ	ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿದ ಪ್ರಾಧಿಕಾರ	ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿರುವ ಮೊತ್ತ, ಮಂಜೂರಾತಿ ಸಂಖ್ಯೆ ಹಾಗೂ ದಿನಾಂಕ
ಧೂರ ತಲಾಬ ನಸಲ್ವಾಯಿ ಕೆರೆ ಅಭಿವೃದ್ಧಿ	81.50	ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ಉತ್ತರ ವಲಯ	ರೂ. 59.00 ಲಕ್ಷ ಸಂಖ್ಯೆ: 3753 ದಿನಾಂಕ : 1–7–2010
ಗಾಂವ ಕೆರೆ ಕಿಲ್ಲನಕೇರಾ ಅಭಿವೃದ್ಧಿ	40.20	ಅಧೀಕ್ಷಕ ಇಂಜನಿಯರ್, ಸಣ್ಣ ನೀರಾವರಿ ವೃತ್ತ, ಗುಲ್ಬರ್ಗಾ	ರೂ. 40.20 ಲಕ್ಷ ಸಂಖ್ಯೆ: 2408 ದಿನಾಂಕ : 6–7–2010
ರಾಯನ ಕೆರೆ ಕಿಲ್ಲನಕೇರಾ ಅಭಿವೃದ್ಧಿ	27.50	ಅಧೀಕ್ಷಕ ಇಂಜನಿಯರ್, ಸಣ್ಣ ನೀರಾವರಿ ವೃತ್ತ, ಗುಲ್ಬರ್ಗಾ	ರೂ. 27.5.50 ಲಕ್ಷ ಸಂಖ್ಯೆ : 2409 ದಿನಾಂಕ : 6–7–2010
ಒಟ್ಟು	**166.14**		

ಈ ಕಾಮಗಾರಿಗಳನ್ನು ಕೈಗೊಳ್ಳಲು ಗುಲ್ಬರ್ಗಾ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ–ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	13–07–2010
ಜಿಲ್ಲಾ ಟೆಂಡರ್ ಬುಲೆಟಿನ್	17–07–2010
ಕರ್ನಾಟಕ ರಾಜ್ಯ ಪತ್ರ	15–7–2010
ಕನ್ನಡ ಪ್ರಭ ದಿನಪತ್ರಿಕೆ	13–7–2010
ಇಂಡಿಯನ್ ಎಕ್ಸ್‌ಪ್ರೆಸ್ ಆಂಗ್ಲ ದಿನಪತ್ರಿಕೆ	14–7–2010

ದಿನಾಂಕ 20–08–2010ರಂದು ಟೆಂಡರ್‌ನ ತಾಂತ್ರಿಕ ಬಿಡ್‌ಅನ್ನು ತೆರೆದು ಪರಿಶೀಲಿಸಲಾಗಿ, ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಟೆಂಡರ್‌ನಲ್ಲಿ ಭಾಗವಹಿಸಿದ್ದ ಏಳು ಜನ ಗುತ್ತಿಗೆದಾರರ ಪೈಕಿ ಇಬ್ಬರು ಗುತ್ತಿಗೆದಾರರು ಮಾತ್ರ ಅರ್ಹತೆ ಹೊಂದಿದ್ದು ಇವರ ಆರ್ಥಿಕ ಬಿಡ್‌ಅನ್ನು 24–09–2010 ರಂದು ತೆರೆಯಲಾಗಿದೆ. ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 1,01,27,282/–
ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 1,00,70,746/–

ಕ್ರ.ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀ ಎಸ್.ಆರ್. ಪಾಟೀಲ ಪ್ರಥಮ ದರ್ಜೆ ಗುತ್ತಿಗೆದಾರರು	1,09,72,084/–	8.34 ಹೆಚ್ಚು	8.95 ಹೆಚ್ಚು
2	ಅಮೃತಾ ಕನ್‌ಸ್ಟ್ರಕ್ಷನ್ಸ್ ಕಂ ಪ್ರೈ.ಲಿ., ಪ್ರಥಮ ದರ್ಜೆ ಗುತ್ತಿಗೆದಾರರು	1,24,90,292/–	23.33 ಹೆಚ್ಚು	24.02 ಹೆಚ್ಚು

ಮೇಲ್ಕಂಡಂತೆ ಶ್ರೀ ಎಸ್.ಆರ್. ಪಾಟೀಲ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಕನಿಷ್ಟ ದರಗಳನ್ನು ನಮೂದಿಸಿರುವ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 8.95 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 14–10–2010ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗಿಟ್ಟ ಪರಿಷ್ಕೃತ ಮೊತ್ತ ರೂ. 1,00,70,746/– ಗಳ ಮೇಲೆ ಶೇ. 8.75 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,09,51,936/– ಗಳಿಗೆ ಕಾಮಗಾರಿಯನ್ನು ಶ್ರೀ ಎಸ್.ಆರ್. ಪಾಟೀಲ, 1ನೇ ದರ್ಜೆ ಗುತ್ತಿಗೆದಾರರು ಇವರಿಗೆ ವಹಿಸುವಂತೆ ಶಿಫಾರಸ್ಸು ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 67 ಕೆಜಿದು 2010, ಬೆಂಗಳೂರು, ದಿನಾಂಕ : 30ನೇ ಅಕ್ಟೋಬರ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಯಾದಗಿರಿ ಜಿಲ್ಲೆ ಹಾಗೂ ತಾಲ್ಲೂಕಿನ ಆರ್.ಆರ್.ಆರ್. ಯೋಜನೆಯಡಿಯ (ಪ್ಯಾಕೇಜ್-08) ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಗಿಟ್ಟ ಪರಿಷ್ಕೃತ ಮೊತ್ತ ರೂ. 1,00,70,746/-ಗಳ ಮೇಲೆ ಶೇ. 8.75 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,09,51,936/- ಗಳಿಗೆ (ರೂ. ಒಂದು ಕೋಟಿ ಒಂಬತ್ತು ಲಕ್ಷ ಐವತ್ತೊಂದು ಸಾವಿರದ ಒಂಬೈನೂರ ಮೂವತ್ತಾರು) ಕಾಮಗಾರಿಯನ್ನು ಶ್ರೀ ಎಸ್.ಆರ್. ಪಾಟೀಲ, 1ನೇ ದರ್ಜೆ ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ 20-01-2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ರುದ್ರಮೂರ್ತಿ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,
ಪಿ. ಆರ್. 2720 ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಹಾವೇರಿ ಜಿಲ್ಲೆಯ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ (ಪ್ಯಾಕೇಜ್-5) ಟೆಂಡರ್ ಅನುಮೋದನೆ ಕುರಿತು.

ಓದಲಾಗಿದೆ :
1. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರ ರವರ ಪತ್ರದ ಸಂಖ್ಯೆ: ಮುಇಂ/ಸನಿ(ಉ) ವಲಯ/ಬಿಜೆಪಿ/ಎಇ-3/2010-11/5496 ದಿನಾಂಕ: 6-10-2010.
2. ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು ರವರ ದಿನಾಂಕ: 28-10-2010ರ ಪತ್ರ ಸಂಖ್ಯೆ: ಮುಸದ/ಆಪ್ತಶಾಖೆ/ಟೆಂಡರ್/09-10/3112.

ಪ್ರಸ್ತಾವನೆ :

ಆರ್.ಆರ್.ಆರ್. ಕಾರ್ಯಕ್ರಮದಡಿ ಭಾರತ ಸರ್ಕಾರದ ಅನುಮೋದನೆ ದೊರಕಿರುವ 375 ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಪೈಕಿ ಹಾವೇರಿ ಜಿಲ್ಲೆಯ ಕೆಳಕಂಡ ಕಾಮಗಾರಿಗಳು ಸೇರಿದ್ದು, ಅವುಗಳಿಗೆ ನೀಡಲಾಗಿರುವ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ವಿವರಗಳು ಕೆಳಕಂಡಂತಿವೆ.

ಕ್ರಮ ಸಂಖ್ಯೆ	ಕಾಮಗಾರಿ ಹೆಸರು	ಕೇಂದ್ರ ಸರ್ಕಾರದಿಂದ ಮಂಜೂರಾದ ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ	ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿದ ಪ್ರಾಧಿಕಾರ	ಅನುಮೋದಿಸಿದ ಮೊತ್ತ ಹಾಗೂ ತಾಂತ್ರಿಕ ಮಂಜೂರಾತಿಯ ನೋಂದಣಿ ಸಂಖ್ಯೆ
1	ಹಾವೇರಿ ಜಿಲ್ಲೆ, ಹಿರೇಕೆರೂರ ತಾಲ್ಲೂಕಿನ ಸುಂಕಾಪುರಕೆರೆ ಸ.ನಂ. 106 ಅಭಿವೃದ್ಧಿ	30.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 30.00 ಲಕ್ಷ ಸಂಖ್ಯೆ: 92/06-10
2	ಹಾವೇರಿ ಜಿಲ್ಲೆ, ಹಿರೇಕೆರೂರ ತಾಲ್ಲೂಕಿನ ಅಬಲೂರ ದೊಡ್ಡಕೆರೆ ಸ.ನಂ. 205 ಅಭಿವೃದ್ಧಿ	50.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 50.00 ಲಕ್ಷ ಸಂಖ್ಯೆ: 95/06-10
3	ಹಾವೇರಿ ಜಿಲ್ಲೆ, ಹಿರೇಕೆರೂರ ತಾಲ್ಲೂಕಿನ ಬೊಗಾವಿ ಓಲಗಿತ್ತಿ ಕೆರೆ ಸ.ನಂ. 132 ಅಭಿವೃದ್ಧಿ	50.00	ಅಧೀಕ್ಷಕ ಇಂಜಿನಿಯರ್, ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 50.00 ಲಕ್ಷ ಸಂಖ್ಯೆ : 96/06-10
4	ಹಾವೇರಿ ಜಿಲ್ಲೆ, ಹಿರೇಕೆರೂರ ತಾಲ್ಲೂಕಿನ ನೂಲಗೇರಿ ದೊಡ್ಡ ಕೆರೆ ಸ.ನಂ. 120/105 ಅಭಿವೃದ್ಧಿ	50.00	ಅಧೀಕ್ಷಕ ಇಂಜಿನಿಯರ್, ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 50.00 ಲಕ್ಷ ಸಂಖ್ಯೆ : 100/06-10
	ಒಟ್ಟು	180.00		

ಈ ಕಾಮಗಾರಿಗಳನ್ನು ಕೈಗೊಳ್ಳಲು ಧಾರವಾಡ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	28-8-2010
ಜಿಲ್ಲಾ ಟೆಂಡರ್ ಬುಲೆಟಿನ್	28-8-2010
ದಿ ಹಿಂದೂ ಆಂಗ್ಲ ದಿನಪತ್ರಿಕೆ	30-8-2010
ಡೆಕ್ಕನ್ ಹೆರಾಲ್ಡ್ ಆಂಗ್ಲ ದಿನಪತ್ರಿಕೆ	31-8-2010

ದಿನಾಂಕ 17-9-2010ರಂದು ಟೆಂಡರ್‌ನ ತಾಂತ್ರಿಕ ಬಿಡ್‌ಅನ್ನು ತೆರೆದು ಪರಿಶೀಲಿಸಲಾಗಿ, ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಟೆಂಡರ್‌ನಲ್ಲಿ ಭಾಗವಹಿಸಿದ್ದ ಒಬ್ಬ ಗುತ್ತಿಗೆದಾರರ ಅರ್ಹತೆ ಹೊಂದಿದ್ದು ಇವರ ಆರ್ಥಿಕ ಬಿಡ್‌ಅನ್ನು 23-9-2010 ರಂದು ತೆರೆಯಲಾಗಿದೆ. ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 1,38,95,698/-	
ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 1,36,17,568/-	
ಕ್ರ.ಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀ ಎನ್. ದಿನೇಶ, ಪ್ರಥಮ ದರ್ಜೆ ಗುತ್ತಿಗೆದಾರರು	1,58,06,249/-	13.75 ಹೆಚ್ಚು	16.07 ಹೆಚ್ಚು

ಮೇಲ್ಕಂಡಂತೆ ಶ್ರೀ ಎನ್. ದಿನೇಶ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿದ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 16.07 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರ್‌ನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 14-10-2010ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರು ಮನವಿಯನ್ನು ಕೂಲಂಕುಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,36,17,568/- ಗಳ ಮೇಲೆ ಶೇಕಡ 12.50 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 1,53,19,764/- ಗಳಿಗೆ ಕಾಮಗಾರಿಯನ್ನು ಶ್ರೀ ಎನ್. ದಿನೇಶ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸುವಂತೆ ಶಿಫಾರಸ್ಸು ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 69 ಕೆಜಿದು 2010, ಬೆಂಗಳೂರು, ದಿನಾಂಕ : 30ನೇ ಅಕ್ಟೋಬರ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾವೇರಿ ಜಿಲ್ಲೆಯ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ (ಪ್ಯಾಕೇಜ್-5) ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ.1,36,17,568/-ಗಳ ಮೇಲೆ ಶೇ. 12.50 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 1,53,19,764/- ಗಳಿಗೆ (ರೂ. ಒಂದು ಕೋಟಿ ಐವತ್ಮೂರು ಲಕ್ಷ ಹತ್ತೊಂಭತ್ತು ಸಾವಿರದ ಏಳು ನೂರ ಅರವತ್ನಾಲ್ಕು) ಕಾಮಗಾರಿಯನ್ನು ಶ್ರೀ ಎನ್. ದಿನೇಶ, 1ನೇ ದರ್ಜೆ ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ 20-01-2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿ. ಆರ್. 2721

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ ಟೆಂಡರ್ ಅನುಮೋದನೆ ಕುರಿತು.

ಓದಲಾಗಿದೆ :
1. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರ ಪತ್ರದ ಸಂಖ್ಯೆ: ಮುಇಂ/ಸನಿ(ಉ) ವಲಯ/ಬಿಜೆಪಿ/ಎಇ-1/2010-11/5612 ದಿನಾಂಕ: 12-10-2010.
2. ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು ರವರ ದಿನಾಂಕ: 28-10-2010ರ ಪತ್ರ ಸಂಖ್ಯೆ: ಮುಸದ/ಆಪ್ತಶಾಖೆ/ಟೆಂಡರ್/09-10/3112.

ಪ್ರಸ್ತಾವನೆ :

ಆರ್.ಆರ್.ಆರ್. ಕಾರ್ಯಕ್ರಮದಡಿ ಭಾರತ ಸರ್ಕಾರದ ಅನುಮೋದನೆ ದೊರಕಿರುವ 375 ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಪೈಕಿ ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಕೆಳಕಂಡ ಕಾಮಗಾರಿಗಳು ಸೇರಿದ್ದು, ಅವುಗಳಿಗೆ ನೀಡಲಾಗಿರುವ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ವಿವರಗಳು ಕೆಳಕಂಡಂತಿವೆ.

ಕಾಮಗಾರಿ ಹೆಸರು	ಕೇಂದ್ರ ಸರ್ಕಾರದಿಂದ ಮಂಜೂರಾದ ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ	ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿದ ಪ್ರಾಧಿಕಾರ	ಅನುಮೋದಿಸಿದ ಮೊತ್ತ ಹಾಗೂ ತಾಂತ್ರಿಕ ಮಂಜೂರಾತಿಯ ನೋಂದಣಿ ಸಂಖ್ಯೆ
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಹಿರೇಕೊಪ್ಪ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	36.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 36.00 ಲಕ್ಷ ಸಂಖ್ಯೆ: 46/06-10
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ತಲ್ಲೂರು ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	29.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 29.00 ಲಕ್ಷ ಸಂಖ್ಯೆ: 18/06-10
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಯರಝರವಿ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	49.95	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 49.95 ಲಕ್ಷ ಸಂಖ್ಯೆ: 47/06-10
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಮಳಗಲಿ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	27.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 27.00 ಲಕ್ಷ ಸಂಖ್ಯೆ: 30/06-10
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಮಾಡಮ್ಗೇರಿ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	21.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 21.00 ಲಕ್ಷ ಸಂಖ್ಯೆ: 38/06-10
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ರುದ್ರಾಪುರ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	22.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 22.00 ಲಕ್ಷ ಸಂಖ್ಯೆ: 31/06-10
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುಗಳಿಹಾಳ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	27.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 27.00 ಲಕ್ಷ ಸಂಖ್ಯೆ: 26/06-10
ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಕೊಡ್ಲಿವಾಡ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	26.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 26.00 ಲಕ್ಷ ಸಂಖ್ಯೆ: 40/06-10
ಒಟ್ಟು	237.95		

ಈ ಕಾಮಗಾರಿಗಳನ್ನು ಕೈಗೊಳ್ಳಲು ಬೆಳಗಾವಿ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	28-8-2010
ಜಿಲ್ಲಾ ಟೆಂಡರ್ ಬುಲೆಟಿನ್	30-8-2010
ಸಂಯುಕ್ತ ಕರ್ನಾಟಕ ದಿನಪತ್ರಿಕೆ	30-8-2010

ದಿನಾಂಕ 17–9–2010ರಂದು ಟೆಂಡರ್‌ನ ತಾಂತ್ರಿಕ ಬಿಡ್‌ಅನ್ನು ತೆರೆದು ಪರಿಶೀಲಿಸಲಾಗಿ, ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಟೆಂಡರ್‌ನಲ್ಲಿ ಭಾಗವಹಿಸಿದ್ದ ಇಬ್ಬರು ಗುತ್ತಿಗೆದಾರರ ಪೈಕಿ ಒಬ್ಬ ಗುತ್ತಿಗೆದಾರರು ಮಾತ್ರ ಅರ್ಹತೆ ಹೊಂದಿದ್ದು ಇವರ ಆರ್ಥಿಕ ಬಿಡ್‌ಅನ್ನು ದಿನಾಂಕ: 1–10–2010 ರಂದು ತೆರೆಯಲಾಗಿದೆ. ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 1,88,12,321/–	
ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ			ರೂ. 1,84,39,830/–	
ಕ್ರಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀ ಹನುಮಂತ ಸಾಗರ, ಪ್ರಥಮ ದರ್ಜೆ ಗುತ್ತಿಗೆದಾರರು	2,25,72,655/–	19.99 ಹೆಚ್ಚು	22.41 ಹೆಚ್ಚು

ಮೇಲ್ಕಂಡಂತೆ ಶ್ರೀ ಹನುಮಂತ ಸಾಗರ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿದ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 22.41 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 14–10–2010ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,84,39,830/– ಗಳ ಮೇಲೆ ಶೇ. 12.50 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 2,07,44,809/– ಗಳಿಗೆ ಕಾಮಗಾರಿಯನ್ನು ಶ್ರೀ ಹನುಮಂತ ಸಾಗರ, 1ನೇ ಗುತ್ತಿಗೆದಾರರಿಗೆ ವಹಿಸುವಂತೆ ಶಿಫಾರಸ್ಸು ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 70 ಕಜಿದು 2010, ಬೆಂಗಳೂರು, ದಿನಾಂಕ : 30ನೇ ಅಕ್ಟೋಬರ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ ಪ್ಯಾಕೇಜ್ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಗಿಡಲಾದ ಮೊತ್ತ ರೂ. 1,84,39,830/–ಗಳ ಮೇಲೆ ಶೇ. 12.50 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 2,07,44,809/– ಗಳಿಗೆ (ರೂ. ಎರಡು ಕೋಟಿ ಏಳು ಲಕ್ಷ ನಲವತ್ನಾಲ್ಕು ಸಾವಿರದ ಎಂಟು ನೂರ ಒಂಭತ್ತು) ಕಾಮಗಾರಿಯನ್ನು ಶ್ರೀ ಹನುಮಂತ ಸಾಗರ, 1ನೇ ದರ್ಜೆ ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ 20–01–2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ. ಆರ್. 2722

ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಬೆಳಗಾವಿ ಜಿಲ್ಲೆಯ ರಾಮದುರ್ಗ ತಾಲ್ಲೂಕಿನ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ ಟೆಂಡರ್ ಅನುಮೋದನೆ ಕುರಿತು.

ಓದಲಾಗಿದೆ : 1. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರರವರ ಪತ್ರದ ಸಂಖ್ಯೆ: ಮುಇಂ/ಸನಿ(ಉ) ವಲಯ/ಬಿಜೆಪಿ/ಎಇ-1/2010-11/5588 ದಿನಾಂಕ: 12-10-2010.

2. ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು ರವರ ದಿನಾಂಕ: 28-10-2010ರ ಪತ್ರ ಸಂಖ್ಯೆ: ಮುಸದ/ಆಪ್ತಶಾಖೆ/ಟೆಂಡರ್/09-10/3112.

ಪ್ರಸ್ತಾವನೆ :

ಆರ್.ಆರ್.ಆರ್. ಕಾರ್ಯಕ್ರಮದಡಿ ಭಾರತ ಸರ್ಕಾರದ ಅನುಮೋದನೆ ದೊರಕಿರುವ 375 ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಪೈಕಿ ಬೆಳಗಾವಿ ಜಿಲ್ಲೆಯ ಕೆಳಕಂಡ ಕಾಮಗಾರಿಗಳು ಸೇರಿದ್ದು, ಅವುಗಳಿಗೆ ನೀಡಲಾಗಿರುವ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ವಿವರಗಳು ಕೆಳಕಂಡಂತಿವೆ.

ಕಾಮಗಾರಿ ಹೆಸರು	ಕೇಂದ್ರ ಸರ್ಕಾರದಿಂದ ಮಂಜೂರಾದ ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ	ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿದ ಪ್ರಾಧಿಕಾರ	ಆಡಳಿತಾತ್ಮಕ ಅನುಮೋದನೆ ನೀಡಿದ ಮೊತ್ತ ಹಾಗೂ ತಾಂತ್ರಿಕ ಮಂಜೂರಾತಿಯ ನೋಂದಣಿ ಸಂಖ್ಯೆ
ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಮುದೇನೂರ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	49.98	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 49.98 ಲಕ್ಷ ಸಂಖ್ಯೆ: 45/06-10
ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ತೋರಣಗಟ್ಟಿ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	49.98	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 49.98 ಲಕ್ಷ ಸಂಖ್ಯೆ: 27/06-10
ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಗೊಡಚಿ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	29.98	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 29.98 ಲಕ್ಷ ಸಂಖ್ಯೆ: 46/06-10
ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಹುಲಕುಂದಾ ಗ್ರಾಮದ ಹತ್ತಿರ ಕೆರೆ ಸುಧಾರಣೆ ಕಾಮಗಾರಿ	17.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 17.00 ಲಕ್ಷ ಸಂಖ್ಯೆ: 32/06-10
ಒಟ್ಟು	146.94		

ಈ ಕಾಮಗಾರಿಗಳನ್ನು ಕೈಗೊಳ್ಳಲು ಧಾರವಾಡ ಸಣ್ಣ ನೀರಾವರಿ ವಿಭಾಗದಿಂದ ಎರಡನೇ ಬಾರಿಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	13-9-2010
ಜಿಲ್ಲಾ ಟೆಂಡರ್ ಬುಲೆಟಿನ್	13-9-2010
ವಿಜಯ ಕರ್ನಾಟಕ ದಿನಪತ್ರಿಕೆ	17-9-2010

ದಿನಾಂಕ 24-9-2010ರಂದು ಟೆಂಡರ್‌ನ ತಾಂತ್ರಿಕ ಬಿಡ್‌ಅನ್ನು ತೆರೆದು ಪರಿಶೀಲಿಸಲಾಗಿ, ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಟೆಂಡರ್‌ನಲ್ಲಿ ಭಾಗವಹಿಸಿದ್ದ ಇಬ್ಬರು ಗುತ್ತಿಗೆದಾರರ ಪೈಕಿ ಒಬ್ಬ ಗುತ್ತಿಗೆದಾರರು ಮಾತ್ರ ಅರ್ಹತೆ ಹೊಂದಿದ್ದು ಇವರ ಆರ್ಥಿಕ ಬಿಡ್‌ನ್ನು ದಿನಾಂಕ: 1-10-2010 ರಂದು ತೆರೆಯಲಾಗಿದೆ. ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 1,15,24,415/-
ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 1,13,15,411/-

ಕ್ರಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀ ಬಿ.ಆರ್. ಕುದರಿ, ಪ್ರಥಮ ದರ್ಜೆ ಗುತ್ತಿಗೆದಾರರು	1,20,48,648/-	4.55 ಹೆಚ್ಚು	6.48 ಹೆಚ್ಚು

ಮೇಲ್ಕಂಡಂತೆ ಶ್ರೀ ಬಿ.ಆರ್. ಕುದರಿ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿದ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 6.48 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 14–10–2010ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,13,15,411/– ಗಳ ಮೇಲೆ ಶೇ. 6.48 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,20,48,648/– ಗಳಿಗೆ ಕಾಮಗಾರಿಯನ್ನು ಶ್ರೀ ಬಿ.ಆರ್. ಕುದರಿ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸುವಂತೆ ಶಿಫಾರಸ್ಸು ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 73 ಕೆಜಿದು 2010, ಬೆಂಗಳೂರು, ದಿನಾಂಕ : 30ನೇ ಅಕ್ಟೋಬರ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ ಪ್ಯಾಕೇಜ್ ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,13,15,411/–ಗಳ ಮೇಲೆ ಶೇ. 6.48 ರಷ್ಟು ಹೆಚ್ಚಿನ ದರದಲ್ಲಿ ಅಂದರೆ ರೂ. 1,20,48,648/– ಗಳಿಗೆ (ರೂ. ಒಂದು ಕೋಟಿ ಇಪ್ಪತ್ತು ಲಕ್ಷ ನಲವತ್ತೆಂಟು ಸಾವಿರದ ಆರು ನೂರ ನಲವತ್ತೆಂಟು) ಕಾಮಗಾರಿಯನ್ನು ಶ್ರೀ ಬಿ.ಆರ್. ಕುದರಿ, 1ನೇ ದರ್ಜೆ ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ 20–01–2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ

ರುದ್ರಮೂರ್ತಿ

ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,

ಪಿ. ಆರ್. 2723 ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಜಲಸಂಪನ್ಮೂಲ ಸಚಿವಾಲಯ

ವಿಷಯ : ಹಾವೇರಿ ಜಿಲ್ಲೆಯ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ (ಪ್ಯಾಕೇಜ್–8) ಟೆಂಡರ್ ಅನುಮೋದನೆ ಕುರಿತು.

ಓದಲಾಗಿದೆ :
1. ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ ಉತ್ತರ ವಲಯ ಬಿಜಾಪುರ ರವರ ಪತ್ರದ ಸಂಖ್ಯೆ: ಮುಇಂ/ಸನಿ(ಉ) ವಲಯ/ಬಿಜೆಪಿ/ಎಇ–3/2010–11/5604 ದಿನಾಂಕ: 12–10–2010.
2. ಅಧ್ಯಕ್ಷರು, ಟೆಂಡರ್ ಪರಿಶೀಲನಾ ಸಮಿತಿ, ಸಣ್ಣ ನೀರಾವರಿ ಇಲಾಖೆ ಹಾಗೂ ಮುಖ್ಯ ಇಂಜಿನಿಯರ್, ಸಣ್ಣ ನೀರಾವರಿ (ದಕ್ಷಿಣ) ವಲಯ, ಬೆಂಗಳೂರು ರವರ ದಿನಾಂಕ: 28–10–2010ರ ಪತ್ರ ಸಂಖ್ಯೆ: ಮುಸದ/ಆಪ್ತಶಾಖೆ/ಟೆಂಡರ್/09–10/3112.

ಪ್ರಸ್ತಾವನೆ :

ಆರ್.ಆರ್.ಆರ್. ಕಾರ್ಯಕ್ರಮದಡಿ ಭಾರತ ಸರ್ಕಾರದ ಅನುಮೋದನೆ ದೊರಕಿರುವ 375 ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಪೈಕಿ ಹಾವೇರಿ ಜಿಲ್ಲೆಯ ಕೆಳಕಂಡ ಕಾಮಗಾರಿಗಳು ಸೇರಿದ್ದು, ಅವುಗಳಿಗೆ ನೀಡಲಾಗಿರುವ ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ವಿವರಗಳು ಕೆಳಕಂಡಂತಿವೆ.

ಕ್ರಮ ಸಂಖ್ಯೆ	ಕಾಮಗಾರಿ ಹೆಸರು	ಕೇಂದ್ರ ಸರ್ಕಾರದಿಂದ ಮಂಜೂರಾದ ಅಂದಾಜು ಮೊತ್ತ ರೂ. ಲಕ್ಷಗಳಲ್ಲಿ	ಆಡಳಿತಾತ್ಮಕ ಅನುಮೋದನೆ ಹಾಗೂ ತಾಂತ್ರಿಕ ಮಂಜೂರಾತಿ ನೀಡಿದ ಪ್ರಾಧಿಕಾರ	ಅನುಮೋದಿಸಿದ ಮೊತ್ತ ಹಾಗೂ ತಾಂತ್ರಿಕ ಮಂಜೂರಾತಿಯ ನೋಂದಣಿ ಸಂಖ್ಯೆ
1	ಶಿಗ್ಗಾಂವ ತಾಲ್ಲೂಕಿನ ಅಂದಲಗಿ ಕೆರೆ ಸ.ನಂ. 139 ಅಭಿವೃದ್ಧಿ	49.00	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 25.00 ಲಕ್ಷ ಸಂಖ್ಯೆ: 76/09–10
2	ಶಿಗ್ಗಾಂವ ತಾಲ್ಲೂಕಿನ ಅಂದಲಗಿ ಕೆರೆ ಸ.ನಂ. 16 ಅಭಿವೃದ್ಧಿ	29.50	ಅಧೀಕ್ಷಕ ಇಂಜಿನಿಯರ್ ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 29.50 ಲಕ್ಷ ಸಂಖ್ಯೆ: 77/09–10

3	ಶಿಗ್ಗಾಂವ ತಾಲ್ಲೂಕಿನ ಅಂದಲಗಿ ಕೆರೆ ಸ.ನಂ. 215 ಅಭಿವೃದ್ಧಿ	29.50	ಅಧೀಕ್ಷಕ ಇಂಜಿಯರ್, ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 29.50 ಲಕ್ಷ ಸಂಖ್ಯೆ : 84/09-10
4	ಶಿಗ್ಗಾಂವ ತಾಲ್ಲೂಕಿನ ಅಂದಲಗಿ ಕೆರೆ ಸ.ನಂ. 184 ಅಭಿವೃದ್ಧಿ	29.50	ಅಧೀಕ್ಷಕ ಇಂಜನಿಯರ್, ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 29.50 ಲಕ್ಷ ಸಂಖ್ಯೆ : 89/09-10
5	ಶಿಗ್ಗಾಂವ ತಾಲ್ಲೂಕಿನ ಶೆಡಗರವಳ್ಳಿ	29.00	ಅಧೀಕ್ಷಕ ಇಂಜನಿಯರ್, ಸಣ್ಣ ನೀರಾವರಿ ವೃತ್ತ ಬೆಳಗಾವಿ	ರೂ. 29.00 ಲಕ್ಷ ಸಂಖ್ಯೆ : 80/09-10
	ಒಟ್ಟು	166.50		

ಈ ಕಾಮಗಾರಿಗಳನ್ನು ಕೈಗೊಳ್ಳಲು ಧಾರವಾಡ ಸಣ್ಣ ನೀರಾವರಿ ವಿಭಾಗದಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮದಡಿ ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಕರೆಯಲಾದ ಅಲ್ಪಾವಧಿ ಟೆಂಡರ್‌ನ ಪ್ರಕಟಣೆಯನ್ನು ಈ ಕೆಳಕಂಡ ಮಾಧ್ಯಮಗಳಲ್ಲಿ ಪ್ರಕಟಿಸಲಾಗಿದೆ.

ರಾಜ್ಯ ಟೆಂಡರ್ ಬುಲೆಟಿನ್	28-8-2010
ಜಿಲ್ಲಾ ಟೆಂಡರ್ ಬುಲೆಟಿನ್	28-8-2010
ವಿಜಯ ಕರ್ನಾಟಕ ದಿನಪತ್ರಿಕೆ	30-8-2010
ಸಂಯುಕ್ತ ಕರ್ನಾಟಕ ದಿನಪತ್ರಿಕೆ	30-8-2010

ದಿನಾಂಕ 17-9-2010ರಂದು ಟೆಂಡರ್‌ನ ತಾಂತ್ರಿಕ ಬಿಡ್‌ಅನ್ನು ತೆರೆದು ಪರಿಶೀಲಿಸಲಾಗಿ, ಈ ಟೆಂಡರ್ ಪ್ರಕಟಣೆಗೆ ಸ್ಪಂದಿಸಿ ಟೆಂಡರ್‌ನಲ್ಲಿ ಭಾಗವಹಿಸಿದ್ದ ಇಬ್ಬರು ಗುತ್ತಿಗೆದಾರರ ಪೈಕಿ ಒಬ್ಬ ಗುತ್ತಿಗೆದಾರರು ಮಾತ್ರ ಅರ್ಹತೆ ಹೊಂದಿದ್ದು ಇವರ ಆರ್ಥಿಕ ಬಿಡ್‌ನ್ನು 30-9-2010 ರಂದು ತೆರೆಯಲಾಗಿದೆ. ವಿವರಗಳು ಕೆಳಕಂಡಂತಿವೆ.

ಮಂಜೂರಾದ ಅಂದಾಜಿನ ದರಗಳಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 1,06,32,783/-
ಪ್ರಸಕ್ತ ಸಾಲಿನ ದರಗಳಿಗೆ ಪರಿಷ್ಕರಿಸಿದಂತೆ ಟೆಂಡರಿಗೆ ಇಡಲಾದ ಮೊತ್ತ	ರೂ. 1,03,35,204/-

ಕ್ರಸಂ.	ಗುತ್ತಿಗೆದಾರರ ಹೆಸರು ಮತ್ತು ದರ್ಜೆ ಶ್ರೀ/ಮೆಸರ್ಸ್	ಟೆಂಡರ್‌ನಲ್ಲಿ ಗುತ್ತಿಗೆದಾರರು ನಮೂದಿಸಿರುವ ದರಗಳಂತೆ ಟೆಂಡರಿನ ಮೊತ್ತ	ಮಂಜೂರಾದ ಅಂದಾಜಿನ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ	ಪರಿಷ್ಕರಿಸಿದ ದರಗಳ ಮೇಲಿನ ಶೇಕಡಾವಾರು ಹೆಚ್ಚಳ/ಕಡಿಮೆ
1	ಶ್ರೀಕೆ. ಸುಬ್ಬಾರೆಡ್ಡಿ, ಪ್ರಥಮ ದರ್ಜೆ ಗುತ್ತಿಗೆದಾರರು	1,15,44,913/-	8.50 ಹೆಚ್ಚು	11.70 ಹೆಚ್ಚು

ಮೇಲ್ಕಂಡಂತೆ ಶ್ರೀ ಕೆ. ಸುಬ್ಬಾರೆಡ್ಡಿ, 1ನೇ ದರ್ಜೆ ಗುತ್ತಿಗೆದಾರರು ಇವರು ಟೆಂಡರ್‌ನಲ್ಲಿ ಅರ್ಹತೆ ಹೊಂದಿದ ಗುತ್ತಿಗೆದಾರರಾಗಿದ್ದು ಇವರು ನಮೂದಿಸಿದ ದರಗಳನ್ನು ಪ್ರಸಕ್ತ ಸಾಲಿನ ದರಗಳಂತೆ ಪರಿಷ್ಕರಿಸಿದ ಟೆಂಡರ್‌ಗಿಟ್ಟ ಮೊತ್ತಕ್ಕೆ ಹೋಲಿಸಿದಾಗ ಶೇಕಡ 11.70 ರಷ್ಟು ಹೆಚ್ಚಾಗಿದ್ದು, ಸದರಿಯವರ ಟೆಂಡರನ್ನು ಸಂಧಾನದ ಮೂಲಕ ಅಂಗೀಕರಿಸಲು ಮುಖ್ಯ ಇಂಜನಿಯರ್, ಸಣ್ಣ ನೀರಾವರಿ ಉತ್ತರ ವಲಯ, ಬಿಜಾಪುರ ಇವರು ಮೇಲೆ (1)ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿರುತ್ತಾರೆ.

ಗುತ್ತಿಗೆದಾರರು ಸೂಚಿಸಿರುವ ದರಗಳನ್ನು ಕಡಿಮೆಗೊಳಿಸುವ ಸಲುವಾಗಿ ಗುತ್ತಿಗೆದಾರರೊಂದಿಗೆ ಸಂಧಾನ ನಡೆಸಲು ದಿನಾಂಕ 14-10-2010ರಂದು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯ ಸಭೆಯನ್ನು ಕರೆಯಲಾಗಿತ್ತು. ಸಭೆಯಲ್ಲಿ ಗುತ್ತಿಗೆದಾರರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದ ನಂತರ ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ. 1,03,35,204/- ಗಳ ಮೇಲೆ ಶೇಕಡ 11.50 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 1,15,23,752/- ಗಳಿಗೆ ಕಾಮಗಾರಿಯನ್ನು ಶ್ರೀ ಕೆ. ಸುಬ್ಬಾರೆಡ್ಡಿ, 1ನೇ ದರ್ಜೆ ಗುತ್ತಿಗೆದಾರರಿಗೆ ವಹಿಸುವಂತೆ ಶಿಫಾರಸ್ಸು ಮಾಡಲು ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ನಿರ್ಧಾರಕ್ಕೆ ಗುತ್ತಿಗೆದಾರರು ತಮ್ಮ ಒಪ್ಪಿಗೆಯನ್ನು ಸೂಚಿಸಿರುವುದಾಗಿ ತಿಳಿಸಿ ಈ ಮೊತ್ತಕ್ಕೆ ಟೆಂಡರ್ ಅಂಗೀಕರಿಸಲು ಇಲಾಖಾ ಟೆಂಡರ್ ಪರಿಶೀಲನಾ ಸಮಿತಿಯು ಮೇಲೆ 2ರಲ್ಲಿ ಓದಲಾದ ಪತ್ರದಲ್ಲಿ ಶಿಫಾರಸ್ಸು ಮಾಡಿದೆ.

ಮೇಲಿನ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರವು ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

ಸರ್ಕಾರದ ಆದೇಶ ಸಂಖ್ಯೆ : ಸನೀಇ 73 ಕೆಜಿದು 2010, ಬೆಂಗಳೂರು, ದಿನಾಂಕ : 30ನೇ ಅಕ್ಟೋಬರ್ 2010

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಹಾವೇರಿ ಜಿಲ್ಲೆಯ ಆರ್.ಆರ್.ಆರ್. ಯೋಜನೆಯಡಿಯ ಕಾಮಗಾರಿಗಳ (ಪ್ಯಾಕೇಜ್-8) ಕಾಮಗಾರಿಯನ್ನು ಪ್ರಸಕ್ತ ಸಾಲಿನ ದರಪಟ್ಟಿಯ ದರಗಳನ್ನು ಪರಿಗಣಿಸಿ ಪರಿಷ್ಕರಿಸಿದ ಟೆಂಡರಿಗಿಡಲಾದ ಮೊತ್ತ ರೂ.1,03,35,204/-ಗಳ ಮೇಲೆ ಶೇ. 11.50 ರಷ್ಟು ಹೆಚ್ಚಿನ ದರಗಳಿಗೆ ಅಂದರೆ ರೂ. 1,15,23,752/- ಗಳಿಗೆ (ರೂ. ಒಂದು ಕೋಟಿ ಹದಿನೈದು ಲಕ್ಷ ಇಪ್ಪತ್ತಮೂರು ಸಾವಿರದ ಏಳು ನೂರ ಐವತ್ತೆರಡು) ಕಾಮಗಾರಿಯನ್ನು ಶ್ರೀ ಕೆ. ಸುಬ್ಬಾರೆಡ್ಡಿ, 1ನೇ ದರ್ಜೆ ಗುತ್ತಿಗೆದಾರರಿಗೆ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ವಹಿಸಲು ಸರ್ಕಾರವು ಅನುಮೋದನೆ ನೀಡಿದೆ.

1. ಕಾಮಗಾರಿಯನ್ನು ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸತಕ್ಕದ್ದು.
2. ಸರ್ಕಾರದ ಅನುಮತಿ ಪಡೆಯದೆ ಕಾಮಗಾರಿಯಲ್ಲಿ ಯಾವುದೇ ಹೆಚ್ಚುವರಿ ಕೆಲಸ ನಿರ್ವಹಿಸಬಾರದು.
3. ಅಸಹಜ ದರಗಳನ್ನು ಸಮನ್ವಯಪಡಿಸಿಕೊಳ್ಳುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ ಎಫ್‌ಡಿ 1 ಟಿಎಫ್‌ಪಿ 2002, ದಿನಾಂಕ 20-01-2003ರಲ್ಲಿ ಇಲಾಖಾ ಕಾರ್ಯದರ್ಶಿಯವರಿಗೆ ನೀಡಿರುವ ಆರ್ಥಿಕಾಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ
ರುದ್ರಮೂರ್ತಿ
ಪದನಿಮಿತ್ತ ಸರ್ಕಾರದ ಅಧೀನ ಕಾರ್ಯದರ್ಶಿ,
ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ)

ಪಿ. ಆರ್. 2724

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ

ವಿಷಯ : ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರನ್ನು ನಾಮನಿರ್ದೇಶನ ಮಾಡುವ ಕುರಿತು.

ಓದಲಾಗಿದೆ :
1. ದಿನಾಂಕ : 26-02-2007ರ ಅಧಿಸೂಚನೆ ಸಂಖ್ಯೆ : ಮಮಇ/3/ಮಭಾಬ/2007.
2. ದಿನಾಂಕ : 11-03-2010ರ ಆದೇಶ ಸಂಖ್ಯೆ : ಮಮಇ/07/ಮಭಾಬ/2010.
3. ದಿನಾಂಕ : 06-05-2010ರ ಆದೇಶ ಸಂಖ್ಯೆ : ಮಮಇ 255 ಮಭಾಬ 2008.
4. ದಿನಾಂಕ : 01-10-2010ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರ ಏಕ ಕಡತ ಸಂಖ್ಯೆ : ಮಮಅಇ/ಪಿಡಿಎಂ/59/2010-11 ದಿನಾಂಕ : 1-10-2010.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮಾಂಕ (1)ರ ಅಧಿಸೂಚನೆಯಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ಪೋಷಣೆ) ಅಧಿನಿಯಮ 2000, ತಿದ್ದುಪಡಿ 2006, ಸೆಕ್ಷನ್ 29(1)(2) ಹಾಗೂ ನಿಯಮಾವಳಿ 2007, ನಿಯಮ 7 (2)ರಡಿ 27 ಜಿಲ್ಲೆಗಳಲ್ಲಿನ ಒಟ್ಟು 28 ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಮೂರು ವರ್ಷಗಳ ಅವಧಿಗೆ ನಾಮನಿರ್ದೇಶನ ಮಾಡಿ ಸಮಿತಿಗಳನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (2)ರ ಆದೇಶದಲ್ಲಿ ದಿನಾಂಕ : 26-02-2007ರ ಅಧಿಸೂಚನೆ ಮೂಲಕ ರಚಿಸಲಾದ ಮಕ್ಕಳ ಕಲ್ಯಾಣ ಸಮಿತಿಗಳ ಕಾರ್ಯಾವಧಿ ಪೂರ್ಣಗೊಂಡ ಹಿನ್ನೆಲೆಯಲ್ಲಿ ಹೊಸ ಸಮಿತಿಗಳು ರಚನೆಯಾಗದ ಕಾರಣ ಅಂತಿಮಗೊಂಡ ದಿನಾಂಕದಂದು ಕಾರ್ಯನಿರ್ವಹಿಸುತ್ತಿದ್ದ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಹೊಸ ಮಕ್ಕಳ ಕಲ್ಯಾಣ ಸಮಿತಿಯನ್ನು ರಚಿಸುವವರೆಗೆ ಅಥವಾ ಮುಂದಿನ ಆದೇಶದವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ವಿಸ್ತರಿಸಿ ಆದೇಶ ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ಆದೇಶದಲ್ಲಿ ಮಕ್ಕಳ ಕಲ್ಯಾಣ ಸಮಿತಿಗೆ ಅಧ್ಯಕ್ಷರು/ಸದಸ್ಯರುಗಳನ್ನು ಮತ್ತು ಬಾಲನ್ಯಾಯ ಮಂಡಳಿಗಳಿಗೆ ಸಮಾಜ ಕಾರ್ಯಕರ್ತರನ್ನು ಆಯ್ಕೆ ಮಾಡಲು ರಾಜ್ಯ ಮಟ್ಟದ ಆಯ್ಕೆ ಸಮಿತಿಯನ್ನು ರಚಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (4)ರಲ್ಲಿ ಆಯ್ಕೆ ಸಮಿತಿಯು ಸಂದರ್ಶನ ನಡೆಸಿ 28 ಜಿಲ್ಲೆಗಳ ಒಟ್ಟು 29 ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ಆಯ್ಕೆ ಮಾಡಿದ್ದು, ಆಯ್ಕೆ ಸಮಿತಿಯ ನಡವಳಿಯನ್ನು ಸಲ್ಲಿಸಿರುತ್ತಾರೆ. ಆದ್ದರಿಂದ 28 ಜಿಲ್ಲೆಗಳ ಒಟ್ಟು 29 ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು/ಸದಸ್ಯರನ್ನು ನಾಮನಿರ್ದೇಶನ ಮಾಡುವಂತೆ ಹಾಗೂ ಅಭ್ಯರ್ಥಿಗಳ ಕೊರತೆ ಇರುವ ಕಾರಣ ಚಿಕ್ಕಬಳ್ಳಾಪುರ ಜಿಲ್ಲೆಯ ಮಕ್ಕಳ ಕಲ್ಯಾಣ ಸಮಿತಿಯ ವ್ಯಾಪ್ತಿಯನ್ನು ಕೋಲಾರಕ್ಕೂ ಹಾಗೂ ಯಾದಗಿರಿ ಜಿಲ್ಲೆಯ ಮಕ್ಕಳ ಕಲ್ಯಾಣ ಸಮಿತಿಯನ್ನು ಗುಲ್ಬರ್ಗಾಕ್ಕೂ ನಿಗದಿಪಡಿಸಿ ಆದೇಶ ಹೊರಡಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರ್ದೇಶಕರು ಕೋರಿರುತ್ತಾರೆ.

ಆದೇಶ ಸಂಖ್ಯೆ : ಮಮಇ 206 ಮಭಾಬ 2010 ಬೆಂಗಳೂರು, ದಿನಾಂಕ: 13ನೇ ಅಕ್ಟೋಬರ್ 2010.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ಪೋಷಣೆ) ಅಧಿನಿಯಮ 2000, ತಿದ್ದುಪಡಿ 2006ರ ಸೆಕ್ಷನ್ 4 ಮತ್ತು 29 ರಡಿಯಲ್ಲಿ ಅನುಬಂಧ-1ರಲ್ಲಿರುವ ಷರತ್ತಿನೊಂದಿಗೆ ಅನುಬಂಧ-2ರಲ್ಲಿರುವ 28 ಜಿಲ್ಲೆಗಳ ಒಟ್ಟು 29 ಮಕ್ಕಳ ಕಲ್ಯಾಣ ಸಮಿತಿಗಳಿಗೆ ಅಧ್ಯಕ್ಷರು ಹಾಗೂ ಸದಸ್ಯರುಗಳನ್ನು ನಾಮನಿರ್ದೇಶನ ಮಾಡಿ ಆದೇಶ ಹೊರಡಿಸಿದೆ.

ಚಿಕ್ಕಬಳ್ಳಾಪುರ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಅಭ್ಯರ್ಥಿಗಳು ಲಭ್ಯವಾಗದ ಕಾರಣ ಸದರಿ ಜಿಲ್ಲೆಗಳ ಮಕ್ಕಳ ಕಲ್ಯಾಣ ಸಮಿತಿಗಳನ್ನು ಮುಂದಿನ ಆದೇಶದವರೆಗೆ ಕ್ರಮವಾಗಿ ಕೋಲಾರ ಮತ್ತು ಗುಲ್ಬರ್ಗಾ ಜಿಲ್ಲೆಗಳ ಕಾರ್ಯವ್ಯಾಪ್ತಿಗೆ ಒಳಪಡಿಸಿದೆ.

ಈ ಮಕ್ಕಳ ಕಲ್ಯಾಣ ಸಮಿತಿಗಳು ಬಾಲನ್ಯಾಯ ಕಾಯಿದೆ 2000 ಮತ್ತು ನಿಯಮ 2007ರನ್ವಯ ಪ್ರದತ್ತವಾದ ಕರ್ತವ್ಯಗಳನ್ನು ನಿರ್ವಹಿಸಲು ಅಧಿಕಾರವನ್ನು ಹೊಂದಿರುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,
ಎಸ್.ಎನ್. ಕೃಷ್ಣಕುಮಾರ್
ಸರ್ಕಾರದ ಅಧೀನ ಕಾರ್ಯದರ್ಶಿ-1
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ

ಅನುಬಂಧ-1

ಆದೇಶ ಸಂಖ್ಯೆ : ಮಮಇ 20 ಮಭಾಬ 2010, ಬೆಂಗಳೂರು, ದಿನಾಂಕ : 13-10-2010

ಷರತ್ತುಗಳು :

1. ಮಕ್ಕಳ ಕಲ್ಯಾಣ ಸಮಿತಿಯ ಕಾರ್ಯವ್ಯಾಪ್ತಿಯು ಆಯಾ ಜಿಲ್ಲೆಗೆ ಮಾತ್ರ ಸೀಮಿತವಾಗಿರುತ್ತದೆ.
2. ರಕ್ಷಣೆ ಮತ್ತು ಪೋಷಣೆಗೆ ಒಳಪಡುವ ಮಕ್ಕಳ ಪ್ರಕರಣಗಳನ್ನು ಮಾತ್ರ ನಿರ್ವಹಿಸತಕ್ಕದ್ದು.
3. ಮಕ್ಕಳ ಕಲ್ಯಾಣ ಸಮಿತಿಯ ಅವಧಿಯು ಆದೇಶ ಹೊರಡಿಸಿದ ದಿನಾಂಕದಿಂದ 3 ವರ್ಷಗಳವರೆಗೆ ಸೀಮಿತವಾಗಿರುತ್ತದೆ.
4. ಪ್ರತಿಯೊಬ್ಬ ಸದಸ್ಯರು ಪ್ರತಿ ಸಿಟ್ಟಿಂಗ್‌ನಲ್ಲಿ ಕನಿಷ್ಠ 4 ಗಂಟೆಗಳು ಕಾರ್ಯನಿರ್ವಹಿಸತಕ್ಕದ್ದು.
